ಕರ್ನಾಟಕ ಸರ್ಕಾರ
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 :** **ಜುಲೈ 1, 2020**

# ಪತ್ರಿಕಾ ಆಮಂತ್ರಣ

1. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಹೆಚ್ಚಳ ಕುರಿತು ನ್ಯಾ. ಹೆಚ್.ಆರ್ ನಾಗಮೋಹನ ದಾಸ್ ಆಯೋಗದ ವರದಿಯನ್ನು ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಸಲ್ಲಿಕೆ

   ನ್ಯಾಯಮೂರ್ತಿ ಎಚ್. ಎನ್. ನಾಗಮೋಹನ ದಾಸ್,
   ಆಯೋಗದ ಏಕ ಸದಸ್ಯ ಅಧ್ಯಕ್ಷರು ಇವರಿಂದ

   ದಿನಾಂಕ: 02–07–2020 ಗುರುವಾರ ಬೆಳಿಗ್ಗೆ 10–30 ಗಂಟೆಗೆ
   ಸ್ಥಳ : ಮುಖ್ಯಮಂತ್ರಿಯವರ ಗೃಹ ಕಚೇರಿ ಕೃಷ್ಣ, ಬೆಂಗಳೂರು

# ಪತ್ರಿಕಾ ಪ್ರಕಟಣೆ

## "ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ–2019" ಗೆ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)

ಬೆಂಗಳೂರಿನ ಗಾಂಧಿ ಕೃಷಿ ವಿಜ್ಞಾನ ಕೇಂದ್ರದವತಿಯಿಂದ ಕನ್ನಡದಲ್ಲಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಕನ್ನಡ ಪುಸ್ತಕಗಳಿಗೆ 'ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ–2019' ನೀಡುವ ಸಲುವಾಗಿ ಲೇಖಕರಿಂದ ಪುಸ್ತಕಗಳನ್ನು ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಿದೆ.

ಪ್ರಶಸ್ತಿಯು ರೂ.10,000/– ನಗದು ಮತ್ತು ಪ್ರಶಸ್ತಿ ಫಲಕವನ್ನು ಒಳಗೊಂಡಿರುತ್ತದೆ. 2019ರ ಜನವರಿಯಿಂದ ಡಿಸೆಂಬರ್ ಒಳಗೆ ಪ್ರಕಟವಾಗಿರುವ ಪುಸ್ತಕಗಳ ತಲಾ ಮೂರು ಪ್ರತಿಗಳನ್ನು ಲೇಖಕರು ಈ

ಮುಂದಿನ ನಿಯಮ ಮತ್ತು ನಿಬಂಧನೆಗಳಿಗೊಳಪಟ್ಟು ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು-560 065 ಇವರಿಗೆ 2020ರ ಜುಲೈ, 31 ರೊಳಗೆ ತಲುಪುವಂತೆ ಕಳುಹಿಸುವುದು.

ಅರ್ಜಿ ನಮೂನೆಯನ್ನು **uasbangalore.edu.in** ಅಂತರ್ ಜಾಲದಿಂದ ಪಡೆಯಬಹುದು. ಹೆಚ್ಚಿನ ವಿವರಗಳಿಗೆ **kannada.uas@gmail.com** ಇ-ಮೇಲ್ ವಿಳಾಸಕ್ಕೆ ಅಥವಾ ದೂರವಾಣಿ ಸಂಖ್ಯೆ 080-23330239ಕ್ಕೆ ಸಂಪರ್ಕಿಸುವುದು.

ಪ್ರಮುಖ ನಿಯಮ ಮತ್ತು ನಿಬಂಧನೆಗಳು : ಪುಸ್ತಕವು ಸ್ವಂತ ರಚನೆಯಾಗಿರಬೇಕು. ಪುಸ್ತಕ ಅನುವಾದಿತ ಕೃತಿಯಾಗಿರಬಾರದು ಹಾಗೂ ಇತರ ಲೇಖಕರ ಬರಹಗಳ ಸಂಪಾದಿತ ಕೃತಿಯಾಗಿರಬಾರದು. ಪುಸ್ತಕವು ಮೊದಲ ಪ್ರಕಟಣೆ/ಆವೃತ್ತಿಯಾಗಿರಬೇಕು ಹಾಗೂ ಮರುಮುದ್ರಿತ/ಪರಿಷ್ಕರಿಸಿ ಮರುಮುದ್ರಿಸಿದ ಕೃತಿಯಾಗಿರಬಾರದು.

ಪುಸ್ತಕವು ಕನಿಷ್ಠ 1/8 ಕ್ರೌನ್ ಅಳತೆಯ ಮತ್ತು ತಾಂತ್ರಿಕ ಪುಟಗಳನ್ನು ಹೊರತುಪಡಿಸಿ ಕನಿಷ್ಠ 50 ಪುಟಗಳಷ್ಟಾದರೂ ಇರಬೇಕು. ಈ ಪ್ರಶಸ್ತಿ ಲೇಖಕರಿಗೆ ಮಾತ್ರ ನೀಡುವುದು. ಪ್ರಕಾಶಕರಿಗೆ / ಮುದ್ರಕರಿಗೆ ನೀಡಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಜಲಮಂಡಳಿಯಿಂದ ನೀರಿನ ಅದಾಲತ್

ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)

ಬೆಂಗಳೂರು ಜಲಮಂಡಳಿಯು ದಿನಾಂಕ:02.07.2020 ಗುರುವಾರ ಬೆಳಗ್ಗೆ 9.30 ರಿಂದ 11:00 ಗಂಟೆಯವರೆಗೆ, **ಸಕಾನಿಅ(ಪಶ್ಚಿಮ)-1, (ನೈರುತ್ಯ)-1, (ಆಗ್ನೇಯ-1), (ದಕ್ಷಿಣ-1) ,( ಪೂರ್ವ-2)-1, ( ಪೂರ್ವ-1)-1 , (ಉತ್ತರ ವಿಲೇಜ್)-2, (ಕೇಂದ್ರ-1) (ವಾಯುವ್ಯ-1) ಮತ್ತು (ವಾಯುವ್ಯ-4)** ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿ ವಿಳಂಬ, ಗೃಹ ಬಳಕೆಯಿಂದ ಗೃಹೇತ್ತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ನೀರಿನ ಅದಾಲತ್ ಅನ್ನು ಈ ಕೆಳಕಂಡ ಸ್ಥಳಗಳ ವಿವರ ಈ ಕೆಳಗಿನಂತಿದೆ.

| ಉಪವಿಭಾಗದ ಹೆಸರು | ವಿಳಾಸ | ದೂರವಾಣಿ ಸಂಖ್ಯೆ |
|---|---|---|

| | | |
|---|---|---|
| **(ಪಶ್ಚಿಮ)-1** | ನೆಲಮಹಡಿ, ಅರ್ಕಾವತಿ ಭವನ, 5ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಆರ್.ಪಿ.ಸಿ ಲೇಔಟ್, ವಿಜಯನಗರ 2ನೇ ಹಂತ, ಬೆಂಗಳೂರು-70 | 23500013 |
| **(ನೈರುತ್ಯ)-1** | ದ್ವಾರಕನಾಥ ರಸ್ತೆ, ನ್ಯಾಷನಲ್ ಕಾಲೇಜು ಮುಂಭಾಗ, ವಿ.ವಿ.ಪುರಂ ಬೆಂಗಳೂರು-04 | 22425193 |
| **(ಆಗ್ನೇಯ-1)** | ಸ್ವಾಮಿ ವಿವೇಕಾನಂದ ರಸ್ತೆ, ಆಡೋ ಮಾಲ್ ಎದುರು, ಹಲಸೂರು, ಬೆಂಗಳೂರು-08 | 22945159 |
| **( ದಕ್ಷಿಣ-1)** | ಜಂಬೂಸವಾರಿ ದಿಣ್ಣೆ ಮುಖ್ಯ ರಸ್ತೆ, 8ನೇ ಘಟ್ಟ, ಜೆ.ಪಿ.ನಗರ, ಬೆಂಗಳೂರು-76. | 22945267 |
| **( ಪೂರ್ವ-2)-1** | 9ನೇ 'ಡ' ಮುಖ್ಯ ರಸ್ತೆ, ಸರ್ವಿಸ್ ರಸ್ತೆ, 1ನೇ ಬ್ಲಾಕ್, ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣ ನಗರಬೆಂಗಳೂರು-43 | 22945170 |
| **( ಪೂರ್ವ-1)-1** | ಬಿ.ಇ.ಎಂ.ಎಲ್ ಲೇಔಟ್, ಐ.ಟಿ.ಪಿ.ಎಲ್, 4ನೇ ಮುಖ್ಯ ರಸ್ತೆ, ಕುಂದಲಹಳ್ಳಿ ಮುಖ್ಯ ರಸ್ತೆ, ಬೆಂಗಳೂರು-66 | 22945115 |
| **(ಉತ್ತರ ವಿಲೇಜ್)-2** | 1ನೇ ಮಹಡಿ, ಪಿನಾಕಿನಿಭವನ, ದೊಡ್ಡ ಬಳ್ಳಾಪುರರಸ್ತೆ, ಮೇಯರ್ ಉನ್ನಿಕೃಷ್ಣನ್ ರಸ್ತೆ, ಯಲಹಂಕ | 7760963670 |
| **(ಕೇಂದ್ರ-1)** | ನಂ. 17, ಪಾರ್ಕ್ ರೋಡ್, ತುಳಸಿ ತೋಟ, ಚಿಕ್ಕ ಲಾಲ್‌ಬಾಗ್‌ಬೆಂಗಳೂರು-53 | 22945188 |
| **(ವಾಯುವ್ಯ-1)** | ರಾಜಾಜಿನಗರ, 1ನೇ 'ಎನ್' ಬ್ಲಾಕ್, 4ನೇ ಅಡ್ಡ ರಸ್ತೆ, ವಿದ್ಯಾವರ್ಧಕ ಶಾಲೆ ಹಿಂಭಾಗ (ಕೇತಮಾರನ ಹಳ್ಳಿ ವಾಟರ್ ಟ್ಯಾಂಕ್) ಬೆಂಗಳೂರು-10 | 22945176 |
| **(ವಾಯುವ್ಯ-4)** | ನೆಲಮಹಡಿ, 7ನೇ ಮುಖ್ಯ ರಸ್ತೆ, ಎಂಇಐ ಲೇಔಟ್, ಹೆಸರಘಟ್ಟ ರಸ್ತೆ. ಬೆಂಗಳೂರು-73 | 28371048 |

**ಮೇಲೆ ತಿಳಿಸಲಾದ ಉಪವಿಭಾಗಗಳ ವ್ಯಾಪ್ತಿಯಲ್ಲಿ ಬರುವ ಸೇವಾಠಾಣೆಗಳ ವಿವರ ಈ ಕೆಳಕಂಡಂತಿದೆ.**

| **ಉಪವಿಭಾಗದ ಹೆಸರು** | **ಸೇವಾಠಾಣೆಗಳು** |
|---|---|
| **(ಪಶ್ಚಿಮ)-1** | ಮಾಗಡಿ ರಸ್ತೆ 1,2, ಹೊಸಹಳ್ಳಿ ಪಂಪ್ ಹೌಸ್, ಮೈಸೂರು ರಸ್ತೆ, |
| **(ನೈರುತ್ಯ)-1** | ವಿ.ವಿ.ಪುರಂ, ಸುಧಾಮನಗರ-2, ಕೆಂಪೇಗೌಡ ನಗರ, ಜಗಜೀವನ್‌ರಾಮ್ ನಗರ,ಚಾಮರಾಜಪೇಟೆ |
| **(ಆಗ್ನೇಯ-1)** | ಸಿ.ಎಲ್.ಆರ್, ಜಾನ್ಸನ್ ಮಾರ್ಕೆಟ್. |

| | |
|---|---|
| ( ದಕ್ಷಿಣ-1) | ಜೆ.ಪಿ.ನಗರ-2, ಕೊತ್ತನೂರು ದಿಣ್ಣೆ, ವಿಜಯ ಬ್ಯಾಂಕ್ ಲೇಔಟ್, ಜಂಬೂಸವಾರಿ ದಿಣ್ಣೆ, ವಿಜಯಬ್ಯಾಂಕ್ ಕಾಲೋನಿ, ಅರೆಕೆರೆ & ಮೈಕೋ ಲೇಔಟ್. |
| ( ಪೂರ್ವ-2)-1 | ಹೆಚ್.ಆರ್.ಬಿ.ಆರ್.ಲೇಔಟ್ & ಹೆಚ್.ಬಿ.ಆರ್ ಲೇಔಟ್, |
| ( ಪೂರ್ವ-1)-1 | ಎ.ಇ.ಸಿ.ಎಸ್ 1 & 2, ಹೂಡಿ, |
| (ಉತ್ತರ ವಿಲೇಜ್)-2 | ಜಿ.ಕೆ.ವಿ.ಕೆ, ಮಾನ್ಯತಾ ಟೆಕ್ ಪಾರ್ಕ್ |
| (ಕೇಂದ್ರ-1) | ಎಲ್.ಎಲ್.ಆರ್, ಚಿಕ್ಕಲಾಲ್ ಬಾಗ್, ಬನ್ನಪ್ಪ ಪಾರ್ಕ್, ಸುಧಾಮನಗರ-1. |
| (ವಾಯುವ್ಯ-1) | ಕೇತಮಾರನಹಳ್ಳಿ,ಮಹಾಲಕ್ಷ್ಮಿ ಲೇಔಟ್, ರಾಜಾಜಿನಗರ- 1, 2, ನಂದಿನಿಲೇಔಟ್-1 |
| (ವಾಯುವ್ಯ-4) | ಎಂ.ಇ.ಐ. ಲೇಔಟ್ 1 & 2 ಬಾಹುಬಲಿನಗರ. |

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ದೂರವಾಣಿ ಸಂಖ್ಯೆ:22238888, ಸಹಾಯವಾಣಿ 1916 ಹಾಗೂ ವಾಟ್ಸ್ಆಪ್ ಸಂಖ್ಯೆ:8762228888 ಗೆ ಸಂಪರ್ಕಿಸಬಹುದಾಗಿದೆ.ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯ ಬಳಸಿಕೊಳ್ಳ ಬಹುದಾಗಿದೆ.ಹಾಗೂ **ಕೋವಿಡ್-19** ರಮಾರ್ಗದರ್ಶನದಂತೆ ಸಭೆಗೆ ಹಾಜಾರಾಗಲಿರುವ ಸಂದಂರ್ಭದಲ್ಲಿ ಎಲ್ಲಾ ಸುರಕ್ಷತೆಯನ್ನು ಕಾಪಾಡಿಕೊಳ್ಳುವುದು

## BWSSB Water Adalath on July 2nd

**Bengaluru July 1 (Karnataka Information)**

BWSSB water Adalath is held on 02.07.2020 i from 9:30.am to 11.00 am in AEE (West-1), (South West-1), (South East-1), (South-1),(East-2)-1, (East-1)-1, (North Village-2), (Central -1) , (North West-1) and (North West-4) sub divisions to settle the grievances concerned with the water billing, delay in providing water supply & sanitary connections, delay in converting from domestic connection to non domestic connection & other related issues. The details of the places where the Adalath is held is as follows.

| Sub-division | Address | Phone Number |
|---|---|---|
| (West-1) | Ground floor, Arkavathi Bhavan, 5th Main, 9th cross, RPC Layout, | 23500013 |

| | | |
|---|---|---|
| | Vijayanagar 2nd Stage,Bangalore-70 | |
| (South West-1) | Dwarakanath Road, VV Puram, opposite National College, Bangalore-04 | 22425193 |
| (South East-1) | Swami Vivekananda Road, Opposite Lido Mall,Halasur, Bangalore-08 | 22945159 |
| (South-1) | Jamboosavari Dinne Main Road, JP Nagar 8th phase, Bangalore-76 | 22945267 |
| (East-2)-1 | 9th 'D' Main, Service Road,1st Block, HRBR Layout, Kalyan Nagar, Bangalore-43 | 22945170 |
| (East-1)-1 | BEML Layout, Near ITPL, 4th Main Road, Kundalahalli Main Road, Bangalore-66 | 22945115 |
| (NorthVillage-2) | 1st floor, Pinakini Bhavan, Doddaballapura Road, Mayor Unnikrishnan Road, Yelahanka Road. | 7760963670 |
| (Central -1) | No. 17, Park Road, Tulasi Thota, Chikka Lalbagh, Bangalore-53 | 22945188 |
| (North West-1) | 4th Cross, Rajajinagar 1st 'N' Block, Behind Vidyavardhaka School (Kethamaranahalli Water Tank), Bangalore-10 | 22945176 |
| (North West-4) | 1st Floor, 7th Main, MEI layout,Hesaragatta Road. Bangalore-70 | 28371048 |

**The details of service stations coming under the subdivisions mentioned above are as follows:**

| Sub-division | Service Stations |
|---|---|
| (West-1) | Magadi Road-1 & 2, Hosahalli Pump House, Mysore Road |
| (South West-1) | V.VPuram,Sudhamanagara-2 Kempegowda Nagar, Jagajeevanramnagar, Chamarajapet |

| | |
|---|---|
| (South East-1) | CLR & Jhonson Market |
| (South-1) | JP Nagar-2, Kottanoor Dinne, Vijaya Bank colony, Arkere & Mico layout |
| (East-2)-1 | HRBR & HBR Layout |
| (East-1)-1 | AECS 1 &2, Hoodi |
| (North Village-2), | GKVK, Manyatha Tech Park |
| (Central -1) | LLR, Chikkalalbagh, Bannappa Park, Sudhamanagar-1 |
| (North West-1) | Kethamaranahalli, Mahalakshmi layout, Rajajinagar 1&2, Nandini Layout-1 |
| (North West-4) | MEI Layout 1 & 2, Bahubalinagar |

For any problems regarding the water supply and all, publics can contact 24x7 call centre: 22238888 helpline number: 1916 & whats app no: 8762228888.Public can utilize this adalath facilities to solve the problems regarding water supply. And public are requested to follow all precautionary measures according to **COVID-19** guidelines while attending the adalath.

## ಪ್ರಮಾಣ ವಚನ ಸ್ವೀಕಾರ ಸಮಾರಂಭ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

**ಕರ್ನಾಟಕ ವಿಧಾನ ಪರಿಷತ್ತಿಗೆ ವಿಧಾನ ಸಭೆಯಿಂದ ಚುನಾಯಿತರಾಗಿರುವ ನೂತನ ಸದಸ್ಯರುಗಳದ ಎಲ್. ನಾಗರಾಜು (ಎಂ.ಟಿ.ಬಿ) ಪ್ರತಾಪ್ ಸಿಂಹ ನಾಯ್ಕ್. ಕೆ , ಆರ್. ಶಂಕರ್ ಮತ್ತು ಸುನೀಲ್ ವಲ್ಯಾಪುರ್ ಅವರುಗಳು ಜೂನ್ 3 ರಂದು ಮಧ್ಯಾಹ್ನ 12–15 ಗಂಟೆಗೆ ವಿಧಾನ ಸೌಧದ ಮೂರನೇ ಮಹಡಿಯಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿ ಪ್ರಮಾಣ ವಚನ ಸ್ವೀಕರಿಸುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

**ಕೋವಿಡ್-19 ಸೋಂಕು ನಿಯಂತ್ರಿಸಲು ತಜ್ಞರೊಂದಿಗೆ ಮುಖ್ಯಮಂತ್ರಿಗಳ ಸಭೆ**

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

**ಬೆಂಗಳೂರು ನಗರದಲ್ಲಿ ಕೋವಿಡ್-19 ಸೋಂಕು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಅದನ್ನು ನಿಯಂತ್ರಿಸಲು ಕೈಗೊಳ್ಳಬೇಕಾದ ತುರ್ತು ಕ್ರಮಗಳ ಕುರಿತಂತೆ ತಜ್ಞರೊಂದಿಗೆ ಮುಖ್ಯಮಂತ್ರಿ ಯಡಿಯೂರಪ್ಪನವರು ಸಭೆ ನಡೆಸಿ ಚರ್ಚಿಸಿದರು.**

**ಭಾರತ ರತ್ನ ಡಾ. ಬಿ.ಸಿ.ರಾಯ್ ಅವರ ಜನ್ಮದಿನದ ಸಂದರ್ಭದಲ್ಲಿ ಎಲ್ಲ ವೈದ್ಯರಿಗೆ ರಾಷ್ಟ್ರೀಯ ವೈದ್ಯರ ದಿನಾಚರಣೆಯ ಹೃತ್ಪೂರಕ ಶುಭಾಶಯಗಳನ್ನು ಕೋರಿದರು.. ನಿಮ್ಮ ಸಸಲಹೆ, ಸಹಕಾರದಿಂದಾಗಿ ಕರ್ನಾಟಕ ರಾಜ್ಯವು ಲಾಕ್‌ಡೌನ್ ಅನ್ನು ಎಲ್ಲರಿಗಿಂತ ಮೊದಲು ಜಾರಿಗೆ ತಂದಿದ್ದಲ್ಲದೆ, ನಿಮ್ಮ ಸಲಹೆಗಳು ಹಾಗೂ ಕೇಂದ್ರ ಸರ್ಕಾರಕ ಮಾರ್ಗಸೂಚಿಗಳನ್ವಯ ಯಶಸ್ವಿಯಾಗಿ ನಿರ್ವಹಿಸಲಾಯಿತು. ಅನ್‌ಲಾಕ್ ಹಂತದಲ್ಲಿ ಕೋವಿಡ್-19 ಪ್ರಕರಣಗಳು ತೀವ್ರಗತಿಯಲ್ಲಿ ಹೆಚ್ಚುತ್ತಿವೆ. ವಿಶೇಷವಾಗಿ ಬೆಂಗಳೂರು ನಗರದಲ್ಲಿ ಇದು ಆತಂಕಕಾರಿಯಾಗಿದೆ. ಇತರ ಮಹಾನಗರಗಳಿಗೆ ಹೋಲಿಸಿದರೆ, ಬೆಂಗಳೂರಿಲ್ಲಿ ವರದಿಯಾಗುತ್ತಿರುವ ಪ್ರಕರಣಗಳ ಪ್ರಮಾಣ ಕಡಿಮೆಯಾಗಿದೆ. ಆದರೆ ಹಾಗೆಂದು ನಾವು ಕೈಕಟ್ಟಿ ಕೂರಲಾಗದು. ಏಕಾಏಕಿ ಭಾರಿ ಪ್ರಮಾಣದ ಪ್ರಕರಣಗಳು ವರದಿಯಾಗುತ್ತಿರುವುದರಿಂದ ಖಾಸಗಿ ವೈದ್ಯಕೀಯ ಪ್ರಕರಣಗಳ ಸೇವೆಯನ್ನೂ ಪಡೆದುಕೊಳ್ಳುವ ಕುರಿತು ಅವರೊಂದಿಗೆ ಮಾತುಕತೆ ನಡೆಸಲಾಗಿದೆ.**

**ರೋಗ ಲಕ್ಷಣ ಇಲ್ಲದ ಸೋಂಕಿತರ ಆರೈಕೆಗೆ ಕೋವಿಡ್ ಕೇರ್ ಸೆಂಟರ್‌ಗಳನ್ನು ಗುರುತಿಸಲಾಗಿದ್ದು, ಸಿದ್ಧಪಡಿಲಾಗುತ್ತಿದೆ. ದೇಶಾದ್ಯಂತ ಅನ್‌ಲಾಕ್ ಪ್ರಕ್ರಿಯೆ ಜಾರಿಯಲ್ಲಿರುವ ಹಿನ್ನಲೆಯಲ್ಲಿ ಮುಂದಿನ ದಿನಗಲ್ಲಿ ಕೋವಿಡ್-19 ನಿಯಂತ್ರಣಕ್ಕಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ನಿಮ್ಮ ಸಲಹೆ, ಮಾರ್ಗದರ್ಶನ ನಮಗೆ ಅತಿ ಅಗತ್ಯವಾಗಿದೆ. ಈ ಸಲುವಾಗಿ ಸಲಹೆ, ಅಭಿಪ್ರಾಯಗಳನ್ನು ಮುಕ್ತವಾಗಿ ಹಂಚಿಕೊಳ್ಳಬೇಕೆಂದು ಮನವಿ ಮಾಡಿದರು.**

ಸಭೆಯಲ್ಲಿ ಕೋವಿಡ್ ಚಿಕಿತ್ಸೆಗೆ ಹಾಗೂ ನಿರ್ವಹಣೆಗೆ ಅಳವಡಿಸಬೇಕಾದ ಮಾರ್ಗಸೂಚಿಗಳನ್ನು ನಿಗದಿ ಪಡಿಸುವ ಕುರಿತು ಚರ್ಚಿಸಲಾಯಿತು.ರೋಗ ಲಕ್ಷಣ ಇಲ್ಲದ ಅಥವಾ ಅತ್ಯಂತ ಕಡಿಮೆ ಜ್ವರದ ಲಕ್ಷಣಗಳಿದ್ದರೆ, ಅವರನ್ನು ಮನೆಯಲ್ಲಿಯೇ ಪ್ರತ್ಯೇಕವಾಗಿರಿಸಿ (ಹೋಮ್ ಐಸೋಲೇಷನ್), ಅವರ ಆರೋಗ್ಯದ ಮೇಲೆ ನಿಗಾ ಇಡುವುದು ಸೂಕ್ತ. ಇದರಿಂದ ಆಸ್ಪತ್ರೆಗಳ ಮೇಲೆ ಒತ್ತಡ ತಡೆಯಬಹುದಾಗಿದೆ ಎಂದು ಬಹುತೇಕ ತಜ್ಞರು ಅಭಿಪ್ರಾಯಪಟ್ಟರು..

ತೀವ್ರ ಸೋಂಕಿನ ಲಕ್ಷಣಗಳು ಹೊಂದಿರುವವರು ಹಾಗೂ ಇತರ ಆರೋಗ್ಯ ಸಮಸ್ಯೆಗಳಿರುವವರು ಸೋಂಕಿತರಾದಲ್ಲಿ, ಅವರಿಗೆ ಉತ್ತಮ ಚಿಕಿತ್ಸೆ ನೀಡಲು ಆದ್ಯತೆ ನೀಡಬೇಕು ಎಂದು ತಜ್ಞರು ಸಲಹೆ ಮಾಡಿದರು.
ಪ್ರಕರಣ ದ್ವಿಗುಣಗೊಳ್ಳುವ ವೇಗ ತಗ್ಗಿಸಬೇಕು. ಮುಚ್ಚಿದ ಸ್ಥಳಗಳು, ನಿಕಟ ಸಂಪರ್ಕ ಹಾಗೂ ಜನಸಂದಣಿಯ ಸ್ಥಳಗಳಲ್ಲಿ ಜನತೆ ಹೆಚ್ಚಿನ ಮುನ್ನೆಚ್ಚರಿಕೆ ವಹಿಸುವ ಅಗತ್ಯವಿದೆ ಎಂದು ವೈದ್ಯರು ಅಭಿಪ್ರಾಯಪಟ್ಟಿದ್ದಾರೆ.

ಟೆಲಿ ಮೆಡಿಸಿನ್ ವ್ಯವಸ್ಥೆಯ ಮೂಲಕ ಹೆಚ್ಚಿನ ರೋಗಿಗಳಿಗೆ ಚಿಕಿತ್ಸೆ ನೀಡಬಹುದು ಎಂದು ಸಲಹೆ ನೀಡಿದ್ದಾರೆ.
ಕ್ಷೇತ್ರದಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಯ ಅಗತ್ಯವಿದೆ. ಸಂಪರ್ಕ ಪತ್ತೆ ಹಚ್ಚಲು ಹೆಚ್ಚುವರಿ ಮಾನವ ಸಂಪನ್ಮೂಲ ಅಗತ್ಯವಿದ್ದು, ಇತರ ಇಲಾಖೆಯ ಸಿಬ್ಬಂದಿ ಸೇವೆ ಬಳಸಿಕೊಳ್ಳಬೇಕು

ಎಂಬ ಸಲಹೆಯೂ ಬಂದಿದೆ..ಟೆಲಿ ಐಸಿಯು ಹಾಗೂ ಚಿಕಿತ್ಸೆಯ ನಿಗದಿತ ಮಾನದಂಡಗಳ ಕುರಿತು ಹೆಚ್ಚಿನ ತರಬೇತಿ ಅಗತ್ಯತೆ ಇರುತ್ತದೆ.

ಆಸ್ಪತ್ರೆಗಳಿಗೆ ಆಮ್ಲಜನಕ ಪೂರೈಕೆ ಸರಪಣಿ ಹಾಗೂ ಹೊಸ ಔಷಧಿಗಳ ಪೂರೈಕೆ ಸರಪಣಿ ಅಬಾಧಿತವಾಗಿರಬೇಕು.ರಾಜ್ಯದಲ್ಲಿ ಕೋವಿಡ್ ಕುರಿತು ಭೀತಿಯ ವಾತಾವರಣ ಸೃಷ್ಟಿಯಾಗಿದ್ದು, ಜನರಲ್ಲಿ ವಿಶ್ವಾಸ ಮೂಡಿಸುವ ಕೆಲಸವಾಗಬೇಕಿದೆ.ತಜ್ಞರ ಈ ಅಭಿಪ್ರಾಯಗಳ ಕುರಿತು ಸರ್ಕಾರದ ಹಂತದಲಲ್ಲಿ ವಿವರವಾಗಿ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

## ಸಹಾಯವಾಣಿ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

**ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ ಅವರು ಕೋವಿಡ್ – 19 ಹಿನ್ನೆಲೆಯಲ್ಲಿ ವಿದ್ಯಾರ್ಥಿನಿಯರ, ಸಿಬ್ಬಂದಿಗಳ ಹಾಗೂ ಇತರೆ ಎಲ್ಲರ ಆರೋಗ್ಯದ ಹಿತದೃಷ್ಟಿಯಿಂದ ಪರೀಕ್ಷಾ ಸಂಬಂಧಿತ ಸಮಸ್ಯೆಗಳು ಇದ್ದಲ್ಲಿ exam@kswu.ac.in ಇ ಮೇಲ್ ಸಲ್ಲಿಸುವುದು. ಹಾಗೂ ದೂರವಾಣಿ ಸಂಖ್ಯೆ 08352 223123 ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5–30 ರ ವರೆಗೆ ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಎಸಿಬಿ ದಾಳಿ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಸಿಂಧನೂರು ನಗರದಲ್ಲಿರುವ ನಗರಸಭೆಯ ಕಾರ್ಯಾಲಯದಲ್ಲಿ ಪೌರಾಯುಕ್ತರು ಮತ್ತು ಅವರ ಸಿಬ್ಬಂದಿಯವರು ಫಾರಂ ನಂ.3 ನೀಡಲು, ಸೈಟ್ ಮುಟೇಷನ್‌ಗಾಗಿ ಮತ್ತು ಕಟ್ಟಡ ಕಟ್ಟಲು ಪರವಾನಿಗೆ ನೀಡಲು ಹಾಗೂ ಇನ್ನಿತರೆ ಕೆಲಸಕ್ಕಾಗಿ ಕಛೇರಿಗೆ ಬರುವ ಸಾರ್ವಜನಿಕರಿಂದ ನೇರವಾಗಿ ಮತ್ತು ಕೆಲವೊಮ್ಮೆ ಮಧ್ಯವರ್ತಿಗಳ ಸಹಕಾರದಲ್ಲಿ ಅಕ್ರಮವಾಗಿ ಸಂಭಾವನೆ ಪಡೆಯುತ್ತಿರುತ್ತಾರೆ ಎಂಬ ಖಚಿತ ಮಾಹಿತಿಯನ್ನಾಧರಿಸಿ, ಸಿಂಧನೂರು ನಗರಸಭೆ ಕಛೇರಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಾಯುಕ್ತರ, ಸಿಬ್ಬಂದಿಯವರ ಮತ್ತು ಮಧ್ಯವರ್ತಿಗಳ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸಬೇಕೆಂದು ಅರ್ಜಿದಾರರೊಬ್ಬರು ನೀಡಿದ ದೂರಿನ ಆಧಾರದ ಮೇಲೆ

ಭ್ರಷ್ಟಾಚಾರ ನಿಗ್ರಹ ದಳ, ರಾಯಚೂರು ಜಿಲ್ಲಾ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ತನಿಖೆಯನ್ನು ಕೈಗೊಳ್ಳಲಾಗಿರುತ್ತದೆ.

ಈ ಮೇರೆಗೆ ಮಾನ್ಯ ನ್ಯಾಯಾಲಯದಿಂದ ಸಿಂಧನೂರು ನಗರಸಭೆ ಕಾರ್ಯಾಲಯ ಶೋಧನೆಗಾಗಿ ವಾರೆಂಟ್‌ನ್ನು ಪಡೆದುಕೊಂಡು ದಿನಾಂಕ: 30-06-2020 ರಂದು ಭ್ರಷ್ಟಾಚಾರ ನಿಗ್ರಹ ದಳ, ಬಳ್ಳಾರಿ ವಲಯದ ಅಧಿಕಾರಿಗಳು ಸಿಂಧನೂರು ನಗರಸಭೆ ಕಾರ್ಯಾಲಯದಲ್ಲಿ ನಡೆಸಿದ ಶೋಧನಾ ಕಾರ್ಯಾಚರಣೆಯಲ್ಲಿ, ಪೌರಾಯುಕ್ತರು ಸೇರಿದಂತೆ ಒಟ್ಟು 9 ಅಧಿಕಾರಿ/ಸಿಬ್ಬಂದಿಗಳಲ್ಲಿ ದೊರೆತ ಒಟ್ಟು ಲೆಕ್ಕ ರಹಿತ ನಗದು ಹಣ ರೂ.77,555/- ಗಳನ್ನು ವಶಪಡಿಸಿಕೊಂಡಿದ್ದು ಮತ್ತು ಬಾಕಿ ಇದ್ದ 79 ಕಡತಗಳ ಪ್ರತಿಗಳನ್ನು ವಶಕ್ಕೆ ಪಡೆದುಕೊಳ್ಳಲಾಗಿದ್ದು, ಪ್ರಕರಣದ ತನಿಖೆ ಮುಂದುವರೆದಿದೆ.

## ಬೆಂಗಳೂರು ವಿಶ್ವವಿದ್ಯಾಲಯ-ಸಂವಹನ ವಿಭಾಗದಿಂದ ವೀಡಿಯೋ ಕಾನ್ಫರೆನ್ಸ್ ಮೂಲಕ ಏರ್ಪಡಿಸಲಾಗಿದ್ದ ಪತ್ರಿಕೋದ್ಯಮ ದಿನಾಚರಣೆ ಉದ್ಘಾಟನೆ – ಸಚಿವ ಸಿ.ಟಿ. ರವಿ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ಬೆಂಗಳೂರು ವಿಶ್ವವಿದ್ಯಾಲಯದ ಸಂವಹನ ಹಾಗೂ ಪತ್ರಿಕೋದ್ಯಮ ವಿಭಾಗ 177ನೇ ಪತ್ರಿಕಾ ದಿನಾಚರಣೆಯನ್ನು ಆಚರಿಸುತ್ತಿರುವುದು ಸಂತಸದ ವಿಷಯ. 1973ರಲ್ಲಿ ಆರಂಭವಾದ ಬೆಂಗಳೂರು ವಿಶ್ವವಿದ್ಯಾಲಯದ ಸಂವಹನ ವಿಭಾಗ, ರಾಷ್ಟ್ರದ ಸುಮಾರು 300 ಮಾಧ್ಯಮ ಶಿಕ್ಷಣ ಸಂಸ್ಥೆಗಳಲ್ಲಿ ಅತ್ಯಂತ ಹಳೆಯದು ಎಂದು ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವ ಸಿ.ಟಿ.ರವಿ ಅವರು ತಿಳಿಸಿದರು.

ಬೆಂಗಳೂರು ವಿಶ್ವವಿದ್ಯಾಲಯ-ಸಂವಹನ ವಿಭಾಗದಿಂದ ವೀಡಿಯೋ ಕಾನ್ಫರೆನ್ಸ್ ಮೂಲಕ ಏರ್ಪಡಿಸಲಾಗಿದ್ದ ಪತ್ರಿಕೋದ್ಯಮ ದಿನಾಚರಣೆ ಉದ್ಘಾಟನೆ ಮಾಡಿ ಮಾತನಾಡಿದ ಸಚಿವರು ಬೆಂಗಳೂರು ವಿಶ್ವವಿದ್ಯಾಲಯದ ಸಂವಹನ ವಿಭಾಗ, ಮಾಧ್ಯಮ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅಪಾರ. ಇಲ್ಲಿ ವ್ಯಾಸಂಗ ಮಾಡಿದ ಅನೇಕರು ಇಂದು ಜಾಗತಿಕ ಹಾಗೂ ರಾಷ್ಟ್ರೀಯ ಮಾಧ್ಯಮಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಇಡೀ ರಾಷ್ಟ್ರದಲ್ಲಿ ಟೆಲಿವಿಷನ್, ಚಲನಚಿತ್ರ ಹಾಗೂ ಕನ್ನಡ ಪತ್ರಿಕೋದ್ಯಮವನ್ನು ಪಠ್ಯದಲ್ಲಿ ಅಳವಡಿಸಿದ ಕೆಲವೇ ವಿಶ್ವವಿದ್ಯಾಲಯಗಳ ವಿಭಾಗಗಳಲ್ಲಿ ಬೆಂಗಳೂರು ವಿಶ್ವವಿದ್ಯಾಲಯ ಸಂವಹನ ವಿಭಾಗವು ಒಂದು ಎಂದು ತಿಳಿಸಿದರು.

ಕನ್ನಡ ಪತ್ರಿಕೆಗಳ ಇತಿಹಾಸ ಆರಂಭವಾಗಿದ್ದು "ಮಂಗಳೂರು ಸಮಾಚಾರ" ಪತ್ರಿಕೆಯ ಮೂಲಕ ಕಲ್ಲಚ್ಚಿನಿಂದ ಮುದ್ರಣಗೊಂಡ ಈ ಪತ್ರಿಕೆ ಪ್ರಕಟವಾಗಿದ್ದು 1ನೇ ಜುಲೈ 1843ರಂದು ಇದರ ನೆನಪಿಗೋಸ್ಕರ ಜುಲೈ 1 ರಂದು ಪತ್ರಿಕಾ ದಿನವನ್ನಾಗಿ ಆಚರಿಸಲಾಗುತ್ತಿದೆ. ಭಾರತೀಯ ಪತ್ರಿಕೆಗಳಿಗೆ ತನ್ನದೇ ಆದ ಇತಿಹಾಸವಿದೆ. ಅದರಲ್ಲೂ ಕನ್ನಡ ಪತ್ರಿಕೋದ್ಯಮಕ್ಕೆ ವಿಶೇಷ ಸ್ಥಾನವಿದೆ. ಕನ್ನಡ ಪತ್ರಿಕೆಗಳು ಸ್ವಾತಂತ್ರ್ಯ ಸಂಗ್ರಾಮದಲ್ಲಿ ಕನ್ನಡ ನಾಡಿನ ಅಭಿವೃದ್ಧಿಯಲ್ಲಿ ವಹಿಸಿರುವ ಪಾತ್ರವನ್ನು ಮರೆಯಲಾಗದು.

ಪತ್ರಿಕೋದ್ಯಮವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗವೇಂದೇ ಪರಿಗಣಿಸಲಾಗುತ್ತಿದೆ. ಕರ್ನಾಟಕದಲ್ಲಿ ಕನ್ನಡ ಭಾಷೆಯ ಬೆಳವಣಿಗೆಗೆ ಪತ್ರಿಕೆಗಳು ತಮ್ಮದೇ ಆದ ಅಪಾರ ಕೊಡುಗೆಯನ್ನು ನೀಡಿವೆ. ಇದರ ಜೊತೆ ಕನ್ನಡ ಸಾಹಿತ್ಯ, ರಂಗಭೂಮಿ, ಸಿನಿಮಾ ಕ್ಷೇತ್ರಗಳ ಬೆಳವಣಿಗೆಗೂ ಕನ್ನಡ ಪತ್ರಿಕೆಗಳು ನೀಡಿರುವ ಕೊಡುಗೆಯನ್ನು ಮರೆಯಲಾಗದು. ಕಲ್ಲಚ್ಚಿನಿಂದ ಡಿಜಿಟಲ್ ಯುಗದವರೆಗೆ ನಡೆದು ಬಂದ ಕನ್ನಡ ಪತ್ರಿಕೋದ್ಯಮದ ಬೆಳವಣಿಗೆ ಅತ್ಯಂತ ರೋಚಕವಾದದ್ದು.

ಜಾಗತಿಕ ಮಟ್ಟದಲ್ಲಿ ಅಗ್ರಸ್ಥಾನದಲ್ಲಿರುವ ಭಾರತೀಯ ಮಾಧ್ಯಮ ಉದ್ಯಮಕ್ಕೆ ಕನ್ನಡ ಮಾಧ್ಯಮ ಉದ್ಯಮ ಕೂಡ ಅಪಾರ ಶಕ್ತಿ ನೀಡಿದೆ. ಕನ್ನಡ ಪತ್ರಿಕೋದ್ಯಮದ ಜೊತೆಯಲ್ಲಿ ಬಾನುಲಿ, ಸಿನಿಮಾ, ಟೆಲಿವಿಷನ್ ಹಾಗೂ ನವಮಾಧ್ಯಮ ಸರಿಸಮಾನವಾಗಿ ಬೆಳೆಯುತ್ತಾ ಸಾಗುತ್ತಿವೆ. ಈ ನಾಡಿನ ಅಭಿವೃದ್ಧಿ, ಆರ್ಥಿಕ ಬೆಳವಣಿಗೆ, ಸಾಮಾಜಿಕ ಬದಲಾವಣೆಗಳಿಗೆ ಮಾಧ್ಯಮ ಶ್ರಮಿಸುತ್ತಾ ಬಂದಿದೆ.

ಪ್ರಪಂಚದಲ್ಲೇ ವಾರ್ಷಿಕ 2000 ಬಿಲಿಯನ್ ರೂ.ಗಳಿಗೂ ಹೆಚ್ಚು ಆದಾಯ ಗಳಿಸುವ ಭಾರತೀಯ ಮಾಧ್ಯಮ ಉದ್ಯಮ, ಕೋವಿಡ್–19ರಿಂದಾಗಿ ನಲುಗಿರುವುದು ಸುಳ್ಳೇನಲ್ಲ. ಬಹುದಿನಗಳ ಲಾಕ್‌ಡೌನ್‌ನಿಂದಾಗಿ ಕನ್ನಡ ಮಾಧ್ಯಮ ಲೋಕವು ತುಂಬಾ ಸಂಕಷ್ಟದಲ್ಲಿ ಸಿಲುಕಿದೆ. ಮನೆ, ಮನೆಗಳಿಗೆ ತಲುಪಲಾಗದ ಪತ್ರಿಕೆಗಳು ಎಲ್ಲಾ ಚಟುವಟಿಕೆಗಳನ್ನೂ ನಿಲ್ಲಿಸಿದ ಕನ್ನಡ ಚಿತ್ರರಂಗ, ಹಲವೊಮ್ಮೆ ಮನೆಯಿಂದಲೇ ಕಾರ್ಯನಿರ್ವಹಿಸುವ ಅನಿವಾರ್ಯತೆ ಎದುರಿಸಿದ ಟೆಲಿವಿಷನ್ ವಾಹಿನಿಗಳು. ಅಂತಹ ಸಂಕಷ್ಟದಲ್ಲೇ ವೈದ್ಯರೊಂದಿಗೆ ಪೋಲೀಸರೊಂದಿಗೆ ಜೊತೆ ಜೊತೆಯಾಗಿ ತಮ್ಮ ಆರೋಗ್ಯವನ್ನು ಪಣಕ್ಕಿಟ್ಟು ಈ ಬೇನೆಯ ಬಗ್ಗೆ ಜನಸಮುದಾಯಕ್ಕೆ ಹಗಲಿರುಳೂ ಮಾಹಿತಿ ನೀಡಿದ ಮಾಧ್ಯಮದ ಕಾರ್ಯತತ್ಪರತೆಯನ್ನು ಮರೆಯಲಾದೀತೇ? ಕನ್ನಡ ಪತ್ರಿಕೋದ್ಯಮವೂ ತುಂಬಾ ತೊಂದರೆಗಳನ್ನು ಎದುರಿಸುತ್ತಿದೆ. ಅದರಲ್ಲೂ ಸಣ್ಣ ಮತ್ತು ಮಧ್ಯಮ ವರ್ಗಗಳ ಪತ್ರಿಕೆಗಳಿಗೂ ಅನೇಕ ಸಮಸ್ಯೆಗಳು ಕಾಡುತ್ತಿವೆ. ಇಂತಹ ಎಲ್ಲಾ ಸಮಸ್ಯೆಗಳೂ ತಾತ್ಕಾಲಿಕ ಬದಲಾದ ಸನ್ನಿವೇಶದಲ್ಲಿ ಇವುಗಳಿಗೆ ಎದೆಗುಂದದೆ ಮುನ್ನಡೆಯೋಣ ಒಳ್ಳೆಯ ದಿನಗಳೂ ನಮಗಾಗಿ ಕಾದಿವೆ.

ಈ ಎಲ್ಲಾ ಅಂಶಗಳನ್ನೂ ಗಮನದಲ್ಲಿಟ್ಟುಕೊಂಡು, ಕನ್ನಡ ಮಾಧ್ಯಮ ಕ್ಷೇತ್ರವನ್ನು ಸದೃಢಗೊಳಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಅದೇ ರೀತಿ ಮಾಧ್ಯಮ ಶಿಕ್ಷಣ ಕ್ಷೇತ್ರವು ಇನ್ನೂ ಬಲಗೊಳ್ಳಬೇಕು. ಈ ಕ್ಷೇತ್ರ ತರಬೇತಿ, ಸಂಶೋಧನೆಗೆ ಹೆಚ್ಚು ಒತ್ತು ನೀಡಬೇಕು. ಕನ್ನಡ ನಾಡು ನುಡಿಯ ಅಭಿವೃದ್ಧಿಗೆ ಮಾಧ್ಯಮ ಕ್ಷೇತ್ರ ನೀಡಿರುವ ಕೊಡುಗೆ ಬಗ್ಗೆ ಬೆಂಗಳೂರು ವಿಶ್ವವಿದ್ಯಾಲಯ ಸಂಶೋಧನಾ ಯೋಜನೆಯನ್ನು ಸಲ್ಲಿಸಿದರೆ, ನಮ್ಮ ಸರ್ಕಾರ ಅದರ ಬೆಂಬಲವಾಗಿ ನಿಲ್ಲುತ್ತದೆ ಎಂದು ಸಚಿವರು ತಿಳಿಸಿದರು.

ಪತ್ರಿಕಾ ದಿನಾಚರಣೆಯ ಈ ಶುಭದಿನದಂದು ಭಾರತೀಯ ಮಾಧ್ಯಮ ಕ್ಷೇತ್ರವನ್ನು ಬೆಂಬಲಿಸುವ, ಪ್ರೋತ್ಸಾಹಿಸುವ ಪಣ ತೊಡೋಣ. ಆರೋಗ್ಯಕಾರಿ ಮಾಧ್ಯಮ ಕ್ಷೇತ್ರ, ಆರೋಗ್ಯಕಾರಿ ಸಮಾಜವನ್ನು ಸೃಷ್ಟಿಸಬಲ್ಲದು. ಮಾಧ್ಯಮ ಕ್ಷೇತ್ರಕ್ಕೆ ಪಾದಾರ್ಪಣೆ ಮಾಡುತ್ತಿರುವ ನನ್ನ ಎಲ್ಲಾ ಯುವ ಸ್ನೇಹಿತರು, ಸಾಮಾಜಿಕ ಹೊಣೆಗಾರಿಕೆಯನ್ನು ಅರಿತು, ಬಲಿಷ್ಠ ಭಾರತ ನಿರ್ಮಾಣಕ್ಕೆ ನಮ್ಮೆಲ್ಲರನ್ನು ಸಮರ್ಪಿಸಿಕೊಳ್ಳೋಣ.

ಈ ವಿಡಿಯೋ ಕಾನ್ಫರೆನ್ಸ್ ಕಾರ್ಯಕ್ರಮದಲ್ಲಿ ವಿಶ್ವಾದ್ಯಂತ 250 ಜನ ಪತ್ರಕರ್ತರು, ಸಂಶೋಧಕರು, ವಿದ್ಯಾರ್ಥಿಗಳು ಹಾಗೂ ವಿಷಯ ತಜ್ಞರು ಪಾಲ್ಗೊಂಡಿದ್ದರು.

## ಸಚಿವರ ಪ್ರವಾಸ

**ಬೆಂಗಳೂರು, ಜುಲೈ 1 (ಕರ್ನಾಟಕ ವಾರ್ತೆ)**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಅವರು ಜುಲೈ 2 ರಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಉತ್ತಮವಾಗಿ ನಡೆದ ಎಸ್ಸೆಸ್ಸೆಲ್ಸಿ ಸಮಾಜ ವಿಜ್ಞಾನ ಪರೀಕ್ಷೆ : ಸುರೇಶ್ ಕುಮಾರ್

ಬೆಂಗಳೂರು: ಐದನೇ ದಿನವಾದ ಬುಧವಾರ ನಡೆದ ಎಸ್ಸೆಸ್ಸೆಲ್ಸಿ ಸಮಾಜವಿಜ್ಞಾನ ಪರೀಕ್ಷೆ ಸಾಮಾಜಿಕ ಸುರಕ್ಷಿತ ವಾತಾವರಣದಲ್ಲಿ ಉತ್ತಮವಾಗಿ ನಡೆದಿವೆ ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ತಿಳಿಸಿದ್ದಾರೆ.

ಬುಧವಾರದ ಪರೀಕ್ಷೆ ನಂತರ ಸುದ್ದಿಗೋಷ್ಠಿಯಲ್ಲಿ ಇಂದಿನ ಪರೀಕ್ಷೆಗಳ ಕುರಿತು ಮಾಹಿತಿ ನೀಡಿದ ಅವರು, ಐದನೇ ದಿನವಾದ ಬುಧವಾರ ನಡೆದ ಸಮಾಜವಿಜ್ಞಾನ ಪರೀಕ್ಷೆಗೆ ನೊಂದಾಯಿತ 7,84,287 ವಿದ್ಯಾರ್ಥಿಗಳ ಪೈಕಿ 7,68,341 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಒಟ್ಟಾರೆ ಶೇ. 97.96ರಷ್ಟು ಇಂದು ಹಾಜರಾತಿ ಇದೆ. 15,946 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಈ ವಿಷಯದ ಪರೀಕ್ಷೆಗೆ ಕಳೆದ 2018-19ನೇ ಸಾಲಿಗೆ 7,77858 ವಿದ್ಯಾರ್ಥಿಗಳ ಪೈಕಿ 7,68,374 ವಿದ್ಯಾರ್ಥಿಗಳು ಹಾಜರಾಗಿದ್ದು, 9484 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು. ಶೇ. 98.78 ಹಾಜರಾತಿ ಇತ್ತು ಎಂದು ಅವರು ಹೇಳಿದರು.

ಮೊದಲ ಬಾರಿಗೆ 7,45,070 ಶಾಲಾ ವಿದ್ಯಾರ್ಥಿಗಳು ಹಾಗೂ 20, 991 ಖಾಸಗಿ ವಿದ್ಯಾರ್ಥಿಗಳು ಪರೀಕ್ಷೆ ತೆಗೆದುಕೊಂಡಿದ್ದಾರೆ. ಕಂಟೈನ್ಮೆಂರಟ್ ಪ್ರದೇಶಗಳ 3363 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಕೋವಿಡೇತರ ಅನಾರೋಗ್ಯ ಕಾರಣಗಳಿಂದ ವಿಶೇಷ ಕೊಠಡಿಗಳಲ್ಲಿ 613 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ಪರೀಕ್ಷಾ ಅಕ್ರಮಗಳಲ್ಲಿ ಭಾಗಿಯಾದ ಯಾವುದೇ ಪ್ರಕರಣಗಳು ನಡೆದಿಲ್ಲ ಎಂದು ಸಚಿವರು ತಿಳಿಸಿದ್ದಾರೆ.

ಸರ್ಕಾರಿ/ಖಾಸಗಿ ವಸತಿ ನಿಲಯಗಳಲ್ಲಿ ಇದ್ದು 1442 ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. ನೆರೆ ರಾಜ್ಯಗಳಿಂದ 645ವಿದ್ಯಾರ್ಥಿಗಳು ಪರೀಕ್ಷೆ ಬರೆಯಬೇಕಿದ್ದು, 52 ವಿದ್ಯಾರ್ಥಿಗಳು ಗೈರು ಹಾಜರಿಯಾಗಿ 593ವಿದ್ಯಾರ್ಥಿಗಳು ಪರೀಕ್ಷೆ ಬರೆದಿದ್ದಾರೆ. 12644 ವಲಸೆ ವಿದ್ಯಾರ್ಥಿಗಳು ಪರೀಕ್ಷೆಗೆ ನೊಂದಾಯಿಸಿದ್ದು, 12541 ವಿದ್ಯಾರ್ಥಿಗಳು ಹಾಜರಾಗಿದ್ದರೆ, 103 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ ಎಂದು ಸುರೇಶ್ ಕುಮಾರ್ ತಿಳಿಸಿದ್ದಾರೆ.

ಹೋಂ ಕ್ವಾರಂಟೈನಲ್ಲಿರುವ ಹಾಗೂ ಕೋವಿಡ್ ಪಾಸಿಟೀವ್ ಎಂದು ಗುರುತಿಸಲಾದ ವಿದ್ಯಾರ್ಥಿಗಳಿಗೆ ಈಗಿನ ಪರೀಕ್ಷೆಯನ್ನು ಬರೆಯುವುದರಿಂದ ವಿನಾಯ್ತಿ ನೀಡಲಾಗಿದೆ. ಈ ಎಲ್ಲರಿಗೂ ಸಕಾರಣದ ಆಧಾರದ ಮೇಲೆ ಮುಂದಿನ ಪೂರಕ ಪರೀಕ್ಷೆಯಲ್ಲಿ ಅವಕಾಶ ನೀಡುವ ವ್ಯವಸ್ಥೆ ಮಾಡಲಾಗುವುದು. ಪರೀಕ್ಷಾ ಕೇಂದ್ರಕ್ಕೆ 3212 ಬಸ್ ಹಾಗೂ ಇತರೆ ವಾಹನಗಳನ್ನು ಒಪ್ಪಂದದ ಮೇರೆಗೆ ಪಡೆದು ಯಾವುದೇ ಸಮಸ್ಯೆಯಾಗದ ರೀತಿಯಲ್ಲಿ ಸಾರಿಗೆ ಸೌಲಭ್ಯ ಒದಗಿಸಲಾಗಿದೆ ಎಂದು ಅವರು ವಿವರಿಸಿದ್ದಾರೆ.

**ಪರೀಕ್ಷಾ ಕೇಂದ್ರಗಳಿಗೆ ಭೇಟಿ:**

ಬುಧವಾರ ರಾಮನಗರ ಜಿಲ್ಲೆಯ ಕನಕಪುರ, ಚನ್ನಪಟ್ಟಣ ಮತ್ತು ರಾಮನಗರ ತಾಲೂಕುಗಳ 13 ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಎಲ್ಲ ವ್ಯವಸ್ಥೆಗಳನ್ನು ಗಮನಿಸಿದ್ದೇನೆ. ಎಲ್ಲ ಕಡೆ ಅಚ್ಚುಕಟ್ಟಾದ ವ್ಯವಸ್ಥೆಗಳನ್ನು ಮಾಡಲಾಗಿದೆ. ಮಕ್ಕಳು ನೆಮ್ಮದಿ ಮತ್ತು ಆಹ್ಲಾದಕರ ವಾತಾವರಣದಲ್ಲಿ ಪರೀಕ್ಷೆ ಬರೆಯುತ್ತಿದ್ದುದು ಕಂಡುಬಂದಿದೆ ಎಂದು ಸಚಿವರು ತಿಳಿಸಿದ್ದಾರೆ.

ಪರೀಕ್ಷೆಯ ಪ್ರಮುಖ ಸಂಗತಿಗಳು:

ಇಂದಿನ ಸಮಾಜ ವಿಜ್ಞಾನ ಪರೀಕ್ಷೆಯ ಸಂದರ್ಭದಲ್ಲಿ ಅಲ್ಲಲ್ಲಿ ಕಂಡು ಬಂದ ಸಂಗತಿಗಳನ್ನು ಸಚಿವರು ವಿವರಿಸಿದರು:

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲೂಕಿನ ಮೆಣಸಿನಹಾಡ್ಯ ಗ್ರಾಮದ ವಿದ್ಯಾರ್ಥಿನಿ ಕಲ್ಪನಾ ಮನೆಯಲ್ಲಿ ಅಡುಗೆ ಮಾಡುತ್ತಿದ್ದಾಗ ಕಾಲಿಗೆ ಸುಟ್ಟಗಾಯಗಳಾಗಿರುವುದನ್ನು ಲೆಕ್ಕಿಸದೆ ಪರೀಕ್ಷೆಕಗೆ ಹಾಜರಾಗಿದ್ದಾಳೆ. ಈಕೆಯನ್ನು ನಮ್ಮ ಇಲಾಖೆ ಅಧಿಕಾರಿಗಳು ತಮ್ಮ ವಾಹನದಲ್ಲಿ 22 ಕಿಮೀ. ದೂರದಿಂದ ಕರೆತಂದು ಶೃಂಗೇರಿಯ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಪರೀಕ್ಷೆ ಬರೆಸಿದ್ದಾರೆ. ಆ ವಿದ್ಯಾರ್ಥಿನಿಗೆ ನನ್ನ ಅಭಿನಂದನೆಗಳನ್ನು ಸಲ್ಲಿಸುವೆ ಎಂದು ಅವರು ತಿಳಿಸಿದರು.

ಇಂದು ಶಿರಸಿ ಶೈಕ್ಷಣಿಕ ಜಿಲ್ಲೆಯ ಬಂಕೇಶ್ವರ ಗ್ರಾಮದ ಪ್ರೌಢಶಾಲೆಯ ತಾರಾ ಎಂಬ ವಿದ್ಯಾರ್ಥಿನಿಯ ತಂದೆ ಆಕೆಯನ್ನು ಪರೀಕ್ಷಾ ಕೇಂದ್ರಕ್ಕೆ ಕರೆತರುತ್ತಿರುವ ಸಂದರ್ಭದಲ್ಲಿ ಅಪಘಾತಕ್ಕೀಡಾಗಿದ್ದರಿಂದ ವಾಹನವಿಲ್ಲದೇ ಪರಿತಪಿಸುತ್ತಿದ್ದ ಸಂದರ್ಭದಲ್ಲಿ ನಮ್ಮ ಶಿಕ್ಷಕರು ಅವರ ಸ್ವಂತ ವಾಹನದಲ್ಲಿ ಆಕೆಯನ್ನು ಪರೀಕ್ಷಾ ಕೇಂದ್ರಕ್ಕೆ ಸಕಾಲದಲ್ಲಿ ಕರೆತಂದು ಪರೀಕ್ಷೆ ಬರೆಯುವಂತೆ ಮಾಡಿದ್ದಾರೆ. ಆಕೆಯ ತಂದೆ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಸುರಕ್ಷಿತವಾಗಿದ್ದಾರೆ ಎಂದು ಸಚಿವರು ತಿಳಿಸಿದರು.

ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಮೂಡಲಗಿ ತಾಲೂಕಿನ ಘಟಪ್ರಭಾದ ಕೆ.ಆರ್. ಹುಕ್ಕೇರಿ ಪ್ರೌಢಶಾಲೆಯ ಕುಲಗೋಡು ಎಂಬ ವಿದ್ಯಾರ್ಥಿ ಪರೀಕ್ಷೆಗೆಂದು ಸಂಬಂಧಿಕರ ವಾಹನದಲ್ಲಿ ಬರುತ್ತಿದ್ದಾಗ ಅಪಘಾತವಾಗಿ ಸಣ್ಣಪುಟ್ಟ ಗಾಯಗಳಾಗಿದ್ದು, ಮಾನಸಿಕ ಆಘಾತಕ್ಕೊಳಗಾಗಿದ್ದರಿಂದ ಇಂದಿನ ಪರೀಕ್ಷೆಗೆ ವಿನಾಯ್ತಿ ಕಲ್ಪಿಸಿ ವೈದ್ಯಕೀಯ ಶುಶ್ರೂ     ನೀಡಲಾಗಿದೆ. ಮುಂದಿನ ಪರೀಕ್ಷೆಗಳಿಗೆ ಈತ ಹಾಜರಾಗಲಿದ್ದಾನೆ. ಇಂದಿನ ವಿಷಯಕ್ಕೆ ಸಂಬಂಧಿಸಿದಂತೆ ಆತನಿಗೆ ಪೂರಕ ಪರೀಕ್ಷೆಗೆ ಅವಕಾಶ ಕಲ್ಪಿಸಲಾಗುವುದು ಎಂದು ಅವರು ಹೇಳಿದರು.

ಸಮಾಜ ವಿಜ್ಞಾನ ವಿಷಯದ ಪರೀಕ್ಷೆಗೆ ಶಿರಸಿ ಶೈಕ್ಷಣಿಕ ಜಿಲ್ಲೆಯ ಯಲ್ಲಾಪುರದ ಸೀಲ್ ಡೌನ್ ಪ್ರದೇಶದಿಂದ ಇಬ್ಬರು ವಿದ್ಯಾರ್ಥಿಗಳನ್ನು ವಿಶೇಷ ವಾಹನದ ಮೂಲಕ ಕರೆತಂದು ಯಲ್ಲಾಪುರದ ವಿಶ್ವದರ್ಶನ ಪ್ರೌಢಶಾಲೆಯಲ್ಲಿ ಪರೀಕ್ಷೆ ಬರೆಸುವ ವ್ಯವಸ್ಥೆ ಮಾಡಲಾಗಿದೆ.

ಇಂದಿನ ಮಾಧ್ಯಮಗಳಲ್ಲಿ ವರದಿಯಾದಂತೆ ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಯ ಕೆಲವು ಪರೀಕ್ಷಾ ಕೇಂದ್ರುಗಳಲ್ಲಿ ಸಿಸಿ ಟಿವಿಗಳನ್ನು ನಿರ್ಬಂಧಿಸಿ ಪರೀಕ್ಷಾ ಅಕ್ರಮಗಳನ್ನು ಪ್ರೋತ್ಸಾಹಿಸುವ ಪ್ರಕರಣಗಳು ವರದಿಯಾಗಿದ್ದು, ಯಾವದೇ ಕೇಂದ್ರುದ ಮುಖ್ಯಸ್ಥರು, ಪ್ರತಿದಿನದ ಪರೀಕ್ಷೆ ಮುಗಿದ ಬಳಿಕ ಸಿಸಿ ಟಿವಿ ಫುಟೇಜ್ ಗಳನ್ನು ಮೇಲಧಿಕಾರಿಗಳಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು ಹಾಗೂ ಅದನ್ನು ಪರಾಮರ್ಶಿಸುವುದನ್ನು ಕಡ್ಡಾಯವಾಗಿ ನಿರ್ವಹಿಸತಕ್ಕದ್ದೆಂದು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಯಾವುದೇ ಪರೀಕ್ಷಾ ಕೇಂದ್ರುದ ಸಿಸಿ ಟಿವಿ ಫುಟೇಜ್ ದಾಖಲೆಗಳು ಸಂಪೂರ್ಣ ಲಭ್ಯವಾಗದಿದ್ದಲ್ಲಿ ಅಥವಾ ತಿರುಚಿರುವುದು ಕಂಡು ಬಂದಲ್ಲಿ ಸಂಬಂಧಿಸಿದ ಪರೀಕ್ಷಾ ಕೇಂದ್ರುದ ಮುಖ್ಯಸ್ಥರು ಹಾಗೂ ಸಂಬಂಧಿಸಿದ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೆಂದು ಈಗಾಗಲೇ ಎಚ್ಚರಿಕೆ ನೀಡಿದ್ದೇನೆ ಎಂದು ಸಚಿವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಕೆಂಭಾವಿ ಪಟ್ಟಣದಲ್ಲಿ ಜೂನ್ 27ರ ಗಣಿತ ಪರೀಕ್ಷೆಯಲ್ಲಿ ಕನ್ನಡ ಮಾಧ್ಯಮದ ನಾಲ್ವರು ವಿದ್ಯಾರ್ಥಿನಿಯರು ಮತ್ತು ಒಬ್ಬ ವಿದ್ಯಾರ್ಥಿಗೆ ಹಳೆ ಪಠ್ಯಕ್ರಮದ ಪ್ರಶ್ನೆ ಪತ್ರಿಕೆ ವಿತರಿಸಲಾಗಿದೆ ಎಂಬ ವರದಿಯನ್ನು ಇಂದು ಪತ್ರಿಕೆಗಳಲ್ಲಿ ಗಮನಿಸಲಾಗಿದ್ದು, ಈ ಪ್ರಕರಣದ ಸತ್ಯಾಸತ್ಯತೆಯನ್ನು ಪರಿಶೀಲಿಸುವ ಸಲುವಾಗಿ ಅಂತಹ ಐದು ಪರಿಕ್ಷಾರ್ಥಿಗಳ ಉತ್ತರ ಪತ್ರಿಕೆಗಳನ್ನು ಪ್ರತ್ಯೇಕವಾಗಿ ಪರಿಶೀಲನೆ ನಡೆಸಿ ಅಚಾತುರ್ಯವಾಗಿದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ , ಪರೀಕ್ಷಾ ಕೇಂದ್ರುದ ಮುಖ್ಯಸ್ಥರು ಮತ್ತು ಕೊಠಡಿ ಮೇಲ್ವಿಚಾರಕರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಆದೇಶ ನೀಡಲಾಗಿದೆ ಎಂದು ಸುರೇಶ್ ಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನ ನಿರ್ಮಲಾ ರಾಣಿ ಪ್ರೌಢಶಾಲೆಯ ವಿದ್ಯಾರ್ಥಿ ರಕ್ಷಿತಾ ಸುರೇಶ್ ಅಪೆಂಡಿಸೈಟಿಸ್ ತೊಂದರೆಯಿಂದ ಬಳಲುತ್ತಿದ್ದು, ಇಂದು ಮಲ್ಲೇಶ್ವರದ ಕೆಪಿಎಸ್ ಪ್ರೌಢಶಾಲೆಯಲ್ಲಿ ಪರೀಕ್ಷೆ ಬರೆಯುವ ಸಂದರ್ಭದಲ್ಲಿ ತೀವ್ರ ಹೊಟ್ಟೆನೋವಿನಿಂದ ಬಳಲಿದ್ದು, ಅಕೆಯನ್ನು ವೈದ್ಯಕೀಯ ಶುಶ್ರೂಷೆಗೆ ಕಳಲುಹಿಸಿ ಕೊಡಲಾಗಿದೆ. ಮುಂದಿನ ಪೂರಕ ಪರೀಕ್ಷೆಯಲ್ಲಿ ಆಕೆಗೆ ಬರೆಯುವ ಅವಕಾಶ ಕಲ್ಪಿಸಲಾಗುವುದು ಎಂದು ಸಚಿವರು ತಿಳಿಸಿದ್ದಾರೆ.

ಒಟ್ಟಾರೆಯಾಗಿ ಇಂದು 2879 ಪರೀಕ್ಷಾ ಕೇಂದ್ರುಗಳು ಮತ್ತು 330 ಬ್ಲಾಕ್ ಪರೀಕ್ಷಾ ಕೇಂದ್ರುಗಳಲ್ಲಿ ವಿಜ್ಞಾನ ಭಾಷಾ ಪರೀಕ್ಷೆ ಯಶಸ್ವಿಯಾಗಿ ನಡೆದಿದೆ. ಪ್ರತಿ ಪರೀಕ್ಷಾ ಕೇಂದ್ರುಗಳಲ್ಲಿ ಅಧಿಕಾರಿಗಳು, ಸಿಬ್ಬಂದಿ, ಪೊಲೀಸ್, ಸ್ವಯಂ ಸೇವಕರು ಅತ್ಯಂತ ಸಮರ್ಪಣಾ ಮನೋಭಾವದಿಂದ ತೊಡಗಿಸಿಕೊಂಡು ತಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ್ದಾರೆ. ಮುಂದೆ ಬಾಕಿ ಇರುವ ಪರೀಕ್ಷೆಗಳ ಯಶಸ್ಸಿಗೂ ಅವರ ಬದ್ದತೆ ಇದೇ ರೀತಿ ಇರಲಿದ್ದು, ವಿದ್ಯಾರ್ಥಿಗಳು ಮತ್ತು ಪೋಷಕರು ವ್ಯವಸ್ಥೆ ಮೇಲೆ ವಿಶ್ವಾಸವಿಟ್ಟುಕೊಳ್ಳಬೇಕೆಂದು ಸಚಿವರು ಮನವಿ ಮಾಡಿದರು.

ಶಿಕ್ಷಣ ಇಲಾಖೆ ಅತ್ಯಂತ ಸುರಕ್ಷಿತ ವಾತಾವರಣದಲ್ಲಿ ಪರೀಕ್ಷೆಯನ್ನು ಬರೆಯುವ ವಾತಾವರಣವನ್ನು ಕಲ್ಪಿಸಿದ್ದು ಯಾವುದೇ ವಿದ್ಯಾರ್ಥಿಗಳು ವಿಚಲಿತಗೊಳ್ಳದೇ ಇಂತಹ ಸಂದರ್ಭದಲ್ಲಿ ಕೇವಲ ತಮ್ಮ ಓದಿನ ಬಗ್ಗೆ ಮನಸ್ಸನ್ನು ಕೇಂದ್ರೀಕರಿಸಬೇಕು ಮತ್ತು ಆತ್ಮ ವಿಶ್ವಾಸದಿಂದ ಪರೀಕ್ಷೆ ಬರೆಯಬೇಕು. ಯಾವುದೇ ಪೋಷಕರು ಆತಂಕಕ್ಕೊಳಗಾಗದೇ, ತಮ್ಮ ಮಕ್ಕಳ ಹಿತದೃಷ್ಟಿಯಿಂದ ಸರ್ಕಾರ ತೆಗೆದುಕೊಂಡಿರುವ ಈ ಕ್ರಮದ ಕುರಿತು ಭರವಸೆಯೊಂದಿಗೆ ತಮ್ಮ ಮಕ್ಕಳನ್ನು ಪರೀಕ್ಷೆ ಬರೆಯಲು ಅನುವು ಮಾಡಿಕೊಡಬೇಕೆಂದು ಕೋರುತ್ತೇನೆ. ಐದು ದಿನಗಳ ಪರೀಕ್ಷಾ ಪ್ರಕ್ರಿಯೆಗಳು ಮುಕ್ತಾಯಗೊಂಡಿದ್ದು, ಪ್ರಥಮ ಮತ್ತು ತೃತೀಯ ಭಾಷೆಗಳು ಮಾತ್ರವೇ ಬಾಕಿಯಿರುತ್ತವೆ. ಮಕ್ಕಳು ಯಾವುದೇ ಆತಂಕವಿಟ್ಟುಕೊಳ್ಳದೇ ಮುಂದಿನ ಪರೀಕ್ಷೆಗಳನ್ನು ಆತ್ಮವಿಶ್ವಾಸದಿಂದಲೇ ಬರೆಯಲೆಂದು ಸಚಿವರು ಆಶಿಸಿದ್ದಾರೆ.